130(183) ಶ್ರೀ ಅಪ್ಪಾಸಾಹೇಬ್ (ಅಪ್ಪು) ಮಲ್ಲಪ್ಪ ಪಟ್ಟಣಶೆಟ್ಟಿ (ಬಿಜಾಪುರ): ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತೋಟಗಾರಿಕಾ ಜಿಲ್ಲೆಯಾಗಿರುವ ವಿಜಾಪುರ ಜಿಲ್ಲೆಯಿಂದ ದ್ರಾಕ್ಷಿ, ದಾಳಿಂಬೆ, ಲಿಂಬೆ, ಸಪೋಟ ಮೊದಲಾದ ಹಣ್ಣುಗಳನ್ನು ಹೇರಳವಾಗಿ ಬೆಳೆದು ದೇಶ ವಿದೇಶಗಳಿಗೆ ರಫ್ತಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:

ಆ) ಇಲ್ಲಿ ಬೆಳೆದಂತಹ ಹಣ್ಣುಗಳಿಂದ ರೈತರು ಹೆಚ್ಚು ಅನುಕೂಲ ಪಡೆಯಲು ಬಿಜಾಪುರ ನಗರದಲ್ಲಿ ವೈಸ್ ಪಾರ್ಕ್ ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ:

ಇ) ಬಿಜಾಪುರದಲ್ಲಿ ವೈನ್ ಪಾರ್ಕ್ ಸ್ಥಾಪಿಸಲು ಸರ್ಕಾರ ಹಾಕಿಕೊಂಡಿರುವ ಯೋಜನೆಗಳೇನು:

ಈ) ಹಾಗಿದ್ದಲ್ಲಿ ಯಾವಾಗ ಸ್ಥಾಪಿಸಲಾಗುವುದು?

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು):

ಅ) ಬಂದಿದೆ.

ಆ) – ಹೌದು –

ಇ) ರಾಜ್ಯದಲ್ಲಿ ವೈನ್ ಪಾರ್ಕ್ ಸ್ಥಾಪನೆಗೆ ಪೂರ್ವಭಾವಿಯಾಗಿ ಅಗತ್ಯವಿರುವ ಕರಡು ವೈನ್ ಪಾಲಿಸಿಯನ್ನು ರೂಪಿಸಲಾಗಿದೆ. ಈ ಸಂಬಂಧ ಅಭಿವೃದ್ಧಿ ಆಯುಕ್ತರು ಎಲ್ಲಾ ಇಲಾಖೆಗಳು, ಉದ್ದಿಮೆಗಳು ಹಾಗೂ ವೈನ್ ದ್ರಾಕ್ಷಿ ಬೆಳೆಗಾರರೊಂದಿಗೆ ಸಭೆಯನ್ನು ಶೀಘ್ರದಲ್ಲಿಯೇ ನಡೆಸಲಿದ್ದಾರೆ. ಸಭೆಯ ನಂತರ ಒಂದು ನಿಖರವಾದ ಯೋಜನೆ ನಿರ್ಧರಿಸಲಾಗುವುದು.

ಈ) ಮೇಲೆ ತಿಳಿಸಿದ ಸಭೆಯ ನಂತರ ವೈನ್ ಪಾಲಿಸಿಗೆ ಒಂದು ನಿಖರವಾದ ರೂಪುರೇಷೆ ನೀಡಿ ಪಾರ್ಕ್ ಸ್ಥಾಪನೆ ಬಗ್ಗೆ ಸರ್ಕಾರದ ಹಂತದಲ್ಲಿ ಶೀಘ್ರ ನಿರ್ಣಯ ಕೈಗೊಳ್ಳಲಾಗುವುದು.

131(184) ಶ್ರೀ ಅಪ್ಪಾಸಾಹೇಬ್ (ಅಪ್ಪು)ಮಲ್ಲಪ್ಪ ಪಟ್ಟಣಶೆಟ್ಟಿ (ವಿಜಾಪುರ): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜಿಲ್ಲಾ ಕೇಂದ್ರವಾಗಿರುವ ವಿಜಾಪುರ ನಗರದಲ್ಲಿ ಹಲವಾರು ಸರ್ಕಾರಿ ಕಛೇರಿಗಳು ಖಾಸಗಿ ಕಟ್ಟಡಗಳಲ್ಲಿ ದುಬಾರಿ ಬಾಡಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ವಿಜಾಪುರದಲ್ಲಿ ಮಿನಿ ವಿಧಾನಸೌಧ ನಿರ್ಮಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಇ) ಮಿನಿ ವಿಧಾನಸೌಧದ ನಿರ್ಮಾಣಕ್ಕೆ ಸ್ಥಳವನ್ನು ಗುರುತಿಸಲಾಗಿದೆಯೇ;

ಈ) ಹಾಗಿದ್ದಲ್ಲಿ, ಅದು ಎಲ್ಲಿ;

ಉ) ಅದಕ್ಕಾಗಿ ವೆಚ್ಚವಾಗುವ ಹಣ ಎಷ್ಟು

ಊ) ಯಾವಾಗ ಈ ಕಾಮಗಾರಿಗೆ ಹಣ ಬಿಡುಗಡೆ ಮಾಡಿ ಮಿನಿ ವಿಧಾನಸೌಧದ ನಿರ್ಮಾಣ ಕಾರ್ಯವನ್ನು ಆರಂಭಿಸಲಾಗುವುದು?

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು):

ಅ) ಹೌದು.

ಆ) ಸರ್ಕಾರದ ಪರಿಶೀಲನೆಯಲ್ಲಿದೆ.

ಇ) ಹೌದು.

ಈ) ವಿಜಾಪುರ ತಾಲ್ಲೂಕಿನ ಮಹಾಲಬಾಗಾಯತ್ ಗ್ರಾಮದ ರಿ.ಸ.ನಂ.313ರಲ್ಲಿ 0–30 ಗುಂಟೆ ಹಾಗೂ 314ರಲ್ಲಿ 12–35 ಎಕರೆ ಒಟ್ಟು 13–25 ಎಕರೆ ಜಮೀನನ್ನು ಮಿನಿ ವಿಧಾನಸೌಧ ನಿರ್ಮಾಣಕ್ಕೆ ಗುರುತಿಸಲಾಗಿದೆ.

ಉ) ಅಂದಾಜು ವೆಚ್ಚ ರೂ. 6.00 ಕೋಟಿ.

ಊ) ಸಂಪನ್ಮೂಲ ಲಭ್ಯವಾದ ಕೂಡಲೇ ಮಿನಿ ವಿಧಾನಸೌಧದ ನಿರ್ಮಾಣದ ಕಾಮಗಾರಿಯನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು.

132(331) ಶ್ರೀ ಬಸವಣ್ಣೆಪ್ಪ ಜಿ. (ಹೊಳೆಹೊನ್ನೂರು): ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ರಚನೆ ಯಾವ ಕಾಯಿದೆಯಡಿ ಮಾಡಲಾಗಿದೆ:

ಆ) ಈ ಮಂಡಳಿಯ ಅಧ್ಯಕ್ಷರ ನೇಮಕಾತಿಗೆ ಸಂಬಂಧಪಟ್ಟಂತೆ ಕಾಯಿದೆಯಡಿ ಮಾಡಿರುವ ಅರ್ಹತೆಗಳೇನು:

ಇ) ಹಾಲಿ ಕಾರ್ಯನಿರ್ವಹಿಸುತ್ತಿರುವ ಅಧ್ಯಕ್ಷರು ಈ ಎಲ್ಲಾ ಅರ್ಹತೆಗಳನ್ನು ಹೊಂದಿರುವರೇ;

ಈ) ಹಾಗಿಲ್ಲವಾದರೆ, ಅವರ ನೇಮಕವನ್ನು ಅಸಿಂಧುಗೊಳಿಸಿ ಹೊಸ ಅಧ್ಯಕ್ಷರನ್ನು ಸರ್ಕಾರ ನೇಮಿಸಲು ಕ್ರಮ ಕೈಗೊಳ್ಳುವುದೆ:

ಶ್ರೀ ಸಿ. ಚೆನ್ನಿಗಪ್ಪ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು):

ಅ) ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯನ್ನು ಜಲ ಮಾಲಿನ್ಯ (ನಿವಾರಣೆ ಮತ್ತು ನಿಯಂತ್ರಣ) ಅಧಿನಿಯಮ 1974 ರ ಸೆಕ್ಷನ್ 4ರ ಅಡಿಯಲ್ಲಿ ರಚಿಸಲಾಗಿದೆ.

ಆ) ಜಲ ಮಾಲಿನ್ಯ (ನಿವಾರಣೆ ಮತ್ತು ನಿಯಂತ್ರಣ) ಅಧಿನಿಯಮ 1974ರ ಸೆಕ್ಷನ್ 4(2)(ಎ)ರಲ್ಲಿ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧ್ಯಕ್ಷರ ನೇಮಕಕ್ಕೆ ಅರ್ಹತೆಯನ್ನು ಕೆಳಕಂಡಂತೆ ನಿಗದಿಗೊಳಿಸಲಾಗಿದೆ.

"Chairman, being a person having special knowledge or practical experience in respect of matters relating to environmental protection or a person having knowledge and experience in administering institutions dealing with teh matters aforesaid, to be nominated by the State Government.

ಇ) ಹೌದು.

ಈ) ಹಾಲಿ ಇರುವ ಅಧ್ಯಕ್ಷರ ಅವಧಿಯು ಕಾನೂನಿನ್ವಯ ಮುಗಿದಿರುವುದರಿಂದ ಹೊಸ ಅಧ್ಯಕ್ಷರನ್ನು ನೇಮಿಸುವ ಸಂಬಂಧ ಕ್ರಮ ತೆಗೆದುಕೊಳ್ಳಲಾಗುತ್ತಿದೆ.

133(333) ಶ್ರೀ ಬಸವಣ್ಣೆಪ್ಪ .ಜಿ (ಹೊಳೆಹೊನ್ನೂರು): ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯ ಸರ್ಕಾರವು ಹೊಸದಾದ ಕೈಗಾರಿಕಾ ನೀತಿಯನ್ನು ಯಾವಾಗ ಘೋಷಿಸುವುದು;